ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	698
ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	04.03.2021
ಉತ್ತರಿಸುವ ಸಚಿವರು	:	ಮಾನ್ಯ ಮುಖ್ಯಮಂತ್ರಿಗಳು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲಾ ಮಾಂಜ್ರಾ ಸರಣಿ ಬ್ಯಾರೇಜ್‌ಗಳಲ್ಲಿ ಗೇಟು ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ತನಿಖೆ ಯಾವ ಹಂತದಲ್ಲಿದೆ; ಮುಗಿದಿದ್ದಲ್ಲಿ, ಮಾಹಿತಿ ಒದಗಿಸುವುದು.	ಬ್ಯಾರೇಜ್ ಗೇಟುಗಳ ಸಮಸ್ಯೆಯಾಗಿ ನೀರು ನಿಲ್ಲದಿರುವ ಬಗ್ಗೆ ಶ್ರೀ ಗುರುನಾಥ ವಡ್ಡೆ, ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯ (ಡಬ್ಲ್ಯೂಪಿ ಸಂ.15937/2019) ಕುರಿತು ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ದಿ:27.06.2019 ರಂದು ವಿಚಾರಣೆ ನಡೆದು, ಅಧೀಕ್ಷಕ ಅಭಿಯಂತರರು, ಕೃಭಾಜನಿನಿ. ಜೆ.ಬಿ.ಸಿ. ವೃತ್ತ, ಭೀಮರಾಯನಗುಡಿ ಇವರು ತಪಾಸಣಾ ವರದಿಯನ್ನು ಅಂಗೀಕರಿಸಿ, ಅದರ ಮೇರೆಗೆ ಇತ್ಯರ್ಥವಾಗಿರುತ್ತದೆ ಮತ್ತು ಸದರಿ ಮೊಕದ್ದಮೆಯನ್ನು ವಜಾಗೊಳಿಸಲಾಗಿದೆ.
ಆ)	ಹಾಗಿದ್ದಲ್ಲಿ ನೂರಾರು ಕೋಟಿ ರೂಪಾಯಿ ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳನ್ನು ಎಸಗಿದ್ದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;	2016 ನೇ ಸಾಲಿನಲ್ಲಿ ಬೃಹತ್ ಪ್ರಮಾಣದ ಪ್ರವಾಹ ಬಂದಿದ್ದು, ಕೆಲವು ಗೇಟುಗಳು ಸ್ವಲ್ಪ ಪ್ರಮಾಣದಲ್ಲಿ ಹಾನಿಗೊಳಗಾಗಿದ್ದು, ಹಾನಿಗೊಳಗಾಗಿದ್ದ ಗೇಟುಗಳು 2017 ನೇ ಸಾಲಿನಲ್ಲಿ ಮೂಲ ಗುತ್ತಿಗೆದಾರರಿಂದ ದುರಸ್ತಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇದರಿಂದ, ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಿಲ್ಲದೆ ದುರಸ್ತಿಗೊಳಿಸಲಾಗಿರುತ್ತದೆ.
ಇ)	ನಾಲ್ಕು ಬ್ಯಾರೇಜ್‌ಗಳಿಗೆ ಖರ್ಚು ಮಾಡಿರುವ ಹಣ ಎಷ್ಟು ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ. (ಸಂಪೂರ್ಣ ಮಾಹಿತಿ ನೀಡುವುದು)	ಬೀದರ್ ಜಿಲ್ಲೆಯಡಿ ಗೋದಾವರಿ ಕಣಿವೆಯ ಮಾಂಜ್ರಾ ನದಿ ಪಾತ್ರದಡಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಲಾದ 4 ಸರಣಿ ಬ್ರಿಡ್ಜ್ ಕಂ ಬ್ಯಾರೇಜ್ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದ್ದು, ವಿವರಗಳು ಈ ಕೆಳಗಿನಂತಿವೆ;
ಈ)	ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ;	

ಕ್ರ ಸಂ	ಯೋಜನೆ ಹೆಸರು	ನಿರ್ಮಾಣದ ವೆಚ್ಚ (ರೂ. ಕೋಟಿಗಳಲ್ಲಿ)	ನೀರಾವರಿ ಒಳಪಡುವ ಕ್ಷೇತ್ರ ಹೆ.ಗಳಲ್ಲಿ.	ಪೂರ್ಣಗೊಂಡ ವರ್ಷ
1	ಜೀರಗಿಹಾಳ ಬ್ರಿಡ್ಜ್ ಕಂ ಬ್ಯಾರೇಜ್	57.84	990	2014
2	ಮಾಣಿಕೇಶ್ವರ ಬ್ರಿಡ್ಜ್ ಕಂ ಬ್ಯಾರೇಜ್	50.73	990	2012
3	ಹಾಲಹಳ್ಳಿ	104.27	3366	2013
4	ಚಂದಾಪುರ	58.66	990	2011
	ಒಟ್ಟು	**271.50**	**6336**	

ಸಂಖ್ಯೆ:ಜಸಂಇ 38 ಎಂಎಲ್ಎ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ